**ಆಯುಕ್ತರು**
ಕಾರ್ಮಿಕ ಇಲಾಖೆ

ಕರ್ನಾಟಕ ಸರ್ಕಾರ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029.
ಕಛೇರಿ:080 2975 3078
ಇಮೇಲ್ : labour.commissioner42@gmail.com

**ಸಂಖ್ಯೆ:** ಕೆಎಸ್ಇಎಲ್ಇಪಿಎಸ್/ಸಿಎಎಲ್-05/ಸಿಆರ್-32/2023-24 **ದಿನಾಂಕ:** 12/09/2023

## : ಸುತ್ತೋಲೆ :

**ವಿಷಯ:** ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ನೇಮಿಸಿಕೊಂಡ ತಪ್ಪಿತಸ್ಥ ಮಾಲೀಕರಿಂದ ರೂ.20,000/-ಗಳ ಪರಿಹಾರವನ್ನು ವಸೂಲು ಮಾಡುವ ವಿಷಯದಲ್ಲಿ ಆದೇಶವನ್ನು ಹೊರಡಿಸುವ ಕುರಿತು.

**ಉಲ್ಲೇಖ:**
1. ಕಾರ್ಮಿಕ ಆಯುಕ್ತರ ಸುತ್ತೋಲೆ ಸಂಖ್ಯೆ:ಇಸಿಎಲ್/ಸಿಆರ್-101/2006-17, ದಿನಾಂಕ:18/08/2007.
2. ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ)ಕಾಯ್ದೆ, 1986ರ ತಿದ್ದುಪಡಿ ಕಾಯ್ದೆ,2016.
3. ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15792/99ರಲ್ಲಿ ಹೊರಡಿಸಿರುವ ಆದೇಶ.
4. ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ನಿಯಮಗಳು(ಕೇಂದ್ರ/ಕರ್ನಾಟಕ)ಗಳ ಅನುಷ್ಠಾನ.
5. ಸರ್ಕಾರದ ಅಧಿಸೂಚನೆ ಸಂಖ್ಯೆ:LD 124 CLC 2016, ದಿನಾಂಕ:01/03/2019
6. ಸರ್ಕಾರದ ಅಧಿಸೂಚನೆ ಸಂಖ್ಯೆ:LD 137 CLC 2017, ದಿನಾಂಕ:25/09/2017.
7. ಕಾರ್ಮಿಕ ಆಯುಕ್ತರ ತಿದ್ದುಪಡಿ ಸುತ್ತೋಲೆ ಸಂಖ್ಯೆ:ಇಸಿಎಲ್/ಸಿಆರ್-101/2006-07.

*=*=*=*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ(ಸಿವಿಲ್) ಸಂಖ್ಯೆ 465/1986ರ ದಿನಾಂಕ:10.12.1996ರಲ್ಲಿ ನೀಡಿದ ನಿರ್ದೇಶನದನ್ವಯ ಅಪಾಯಕಾರಿ ಉದ್ದಿಮೆ/ಸಂಸ್ಥೆಗಳಲ್ಲಿ ಬಾಲಕಾರ್ಮಿಕರನ್ನು ನೇಮಿಸಿಕೊಂಡ ತಪ್ಪಿತಸ್ಥ ಮಾಲೀಕರು ತಾವು ನಿಯೋಜಿಸಿಕೊಂಡ ಪ್ರತಿ ಮಗುವಿಗೆ ರೂ.20,000/-ಗಳನ್ನು ಪಾವತಿಸಬೇಕಾಗಿರುತ್ತದೆ.

ಕೇಂದ್ರ ಸರ್ಕಾರವು ಬಾಲಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ಅನ್ನು ತಿದ್ದುಪಡಿ ಮಾಡಿ "ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ಕಾಯ್ದೆ, 1986" ಎಂದು ಶೀರ್ಷಿಕೆ ತಿದ್ದುಪಡಿಯೊಂದಿಗೆ ದಿನಾಂಕ: 30.07.2016 ರಂದು ಭಾರತ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸದರಿ ತಿದ್ದುಪಡಿ ಮಾಡಿ ಜಾರಿಗೆ ತಂದಿರುತ್ತದೆ.

ರಾಜ್ಯ ಸರ್ಕಾರವು ಉಲ್ಲೇಖ(5)ರಲ್ಲಿ ಎಲ್ಲಾ ಜಿಲ್ಲೆಗಳಲ್ಲಿ "ಜಿಲ್ಲಾ ಬಾಲ ಹಾಗೂ ಕಿಶೋರಕಾರ್ಮಿಕ ಪುನರ್ವಸತಿ ನಿಧಿ ಯೋಜನೆ"ಯನ್ನು ಸ್ಥಾಪಿಸಿ, ತಪ್ಪಿತಸ್ಥ ಮಾಲೀಕರು ತಾವು ನಿಯೋಜಿಸಿಕೊಂಡ ಪ್ರತಿ ಮಗುವಿಗೆ ರೂ.20,000/-ಗಳನ್ನು "ಜಿಲ್ಲಾ ಬಾಲ ಹಾಗೂ ಕಿಶೋರಕಾರ್ಮಿಕ ಪುನರ್ವಸತಿ ನಿಧಿ ಯೋಜನೆ"ಗೆ ಜಮಾ ಮಾಡಲು ನಿರ್ದೇಶನ ನೀಡಲಾಗಿರುತ್ತದೆ.

ಈ ಹಿಂದೆ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ನೇಮಿಸಿಕೊಂಡ ತಪ್ಪಿತಸ್ಥ ಮಾಲೀಕರಿಗೆ ಕಾನೂನು ಕ್ರಮಗಳನ್ನು ಕೈಗೊಳ್ಳಲು ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು ಸೂಚನಾ ಪತ್ರ ಜಾರಿ ಮಾಡಿ ಮಾಲೀಕರಿಂದ ನಿಯಮಾನುಸಾರ ಹೇಳಿಕೆ ಪಡೆದು ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ತಪ್ಪಿತಸ್ಥ ಮಾಲೀಕರು ರೂ.20,000/-ಗಳ ಪರಿಹಾರದ ಮೊತ್ತವನ್ನು ಕಾರ್ಪಸ್ ನಿಧಿಗೆ ಜಮಾ ಮಾಡಬೇಕಾಗಿರುತ್ತದೆ. ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು ಆದೇಶಗಳನ್ನು ಹೊರಡಿಸಿ ಸಂಬಂಧಪಟ್ಟ ತಪ್ಪಿತಸ್ಥ ಮಾಲೀಕರು ಪರಿಹಾರದ ಮೊತ್ತವನ್ನು ಠೇವಣಿ ಮಾಡಲು ವಿಫಲರಾದಲ್ಲಿ ಸದರಿ ಆದೇಶದ ಪ್ರತಿಯನ್ನು ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು ಅವರ ಉಪ ಕಾರ್ಮಿಕ ಆಯುಕ್ತರು/ಸಹಾಯಕ ಕಾರ್ಮಿಕ ಆಯುಕ್ತರುಗಳಿಗೆ ಸಲ್ಲಿಸುವಂತೆ ಆ ನಂತರ ಸದರಿ ಮೊತ್ತವನ್ನು ಭೂ ಕಂದಾಯ ಬಾಕಿ ಎಂದು ವಸೂಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಉಪ ಕಾರ್ಮಿಕ ಆಯುಕ್ತರು/ಸಹಾಯಕ ಕಾರ್ಮಿಕ ಆಯುಕ್ತರುಗಳು 15 ದಿವಸಗಳೊಳಗಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಕಳುಹಿಸುವಂತೆ ಆದೇಶವಿರುತ್ತದೆ.

ಉಲ್ಲೇಖ(6)ರಲ್ಲಿ ರಾಜ್ಯ ಸರ್ಕಾರವು ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ಕಾಯ್ದೆ, 1986ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕಾರ್ಮಿಕ ಅಧಿಕಾರಿಗಳನ್ನು ಜಿಲ್ಲಾ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಿ ಅಧಿಸೂಚನೆ ಹೊರಡಿಸಿರುತ್ತದೆ. ಇನ್ನು ಮುಂದೆ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ನೇಮಿಸಿಕೊಂಡ ತಪ್ಪಿತಸ್ಥ ಮಾಲೀಕರಿಗೆ ಕಾನೂನು ಕ್ರಮಗಳನ್ನು ಕೈಗೊಳ್ಳಲು ಕಾರ್ಮಿಕ ಅಧಿಕಾರಿಗಳು ಸೂಚನಾ ಪತ್ರ ಜಾರಿ ಮಾಡಿ ಮಾಲೀಕರಿಂದ ನಿಯಮಾನುಸಾರ ಹೇಳಿಕೆ ಪಡೆದು ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ಪರಿಹಾರದ ಮೊತ್ತ ರೂ.20,000/-ಗಳನ್ನು ಪಾವತಿ ಮಾಡುವ ಸಂಬಂಧ ಆದೇಶ ಹೊರಡಿಸುವುದು. ಸದರಿ ಆದೇಶದನ್ವಯ ತಪ್ಪಿತಸ್ಥ ಮಾಲೀಕರು ರೂ.20,000/-ಗಳ ಪರಿಹಾರದ ಮೊತ್ತವನ್ನು "ಜಿಲ್ಲಾ ಬಾಲ ಹಾಗೂ ಕಿಶೋರಕಾರ್ಮಿಕ ಪುನರ್ವಸತಿ ನಿಧಿ ಯೋಜನೆ"ಗೆ ಠೇವಣಿ ಮಾಡಲು ವಿಫಲರಾದಲ್ಲಿ ಸದರಿ ಆದೇಶದ ಪ್ರತಿಯನ್ನು ಸಂಬಂಧಪಟ್ಟ ಕಾರ್ಮಿಕ ಅಧಿಕಾರಿಗಳು ಅವರ ಕಾರ್ಯವ್ಯಾಪ್ತಿಯ ಉಪ ಕಾರ್ಮಿಕ ಆಯುಕ್ತರು/ಸಹಾಯಕ ಕಾರ್ಮಿಕ ಆಯುಕ್ತರುಗಳಿಗೆ ಸಲ್ಲಿಸುವಂತೆ ಆ ನಂತರ ಸದರಿ ಮೊತ್ತವನ್ನು ಭೂ ಕಂದಾಯ ಬಾಕಿ ಎಂದು ವಸೂಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಉಪ ಕಾರ್ಮಿಕ ಆಯುಕ್ತರು/ಸಹಾಯಕ ಕಾರ್ಮಿಕ ಆಯುಕ್ತರುಗಳು 15 ದಿವಸಗಳೊಳಗಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಕಳುಹಿಸುವಂತೆ ಈ ಮೂಲಕ ಸೂಚಿಸಿದೆ.

ಇನ್ನು ಮುಂದೆ ಮೇಲ್ಕಂಡ ಪ್ರಕರಣಗಳ ವಿಚಾರಣೆಯನ್ನು ಯಾವುದೇ ವಿಳಂಬಕ್ಕೆ ಆಸ್ಪದ ನೀಡದಂತೆ ತ್ವರಿತಗತಿಯಲ್ಲಿ ವಿಲೇವಾರಿ ಮಾಡುವಂತೆ ಈ ಮೂಲಕ ಸೂಚಿಸಿದೆ.

ಆಯುಕ್ತರು
ಕಾರ್ಮಿಕ ಇಲಾಖೆ

**ಇವರಿಗೆ,**

ಎಲ್ಲಾ ಕಾರ್ಮಿಕ ಅಧಿಕಾರಿಗಳು

**ಪ್ರತಿಯನ್ನು,**

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
2. ಎಲ್ಲಾ ಉಪ ಕಾರ್ಮಿಕ ಆಯುಕ್ತರು
3. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು